ಕರ್ನಾಟಕ ವಿಧಾನ ಸಭೆ, ಸಂಶೋಧನೆ ಹಾಗೂ ಉಲ್ಲೇಖನಾ ಶಾಖೆ

ARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE 14/3/2021

# ನನ್ನ ವಿಡಿಯೋ ನಾನೇ ಬಿಡುಗಡೆ ಮಾಡ್ತೀನಾ?

## ನಾನು ನಿರಪರಾಧಿ, ಸತ್ಯ ಸಾಬೀತುಪಡಿಸುತ್ತೇನೆ ಯುವತಿ ಆರೋಪಕ್ಕೆ ಜಾರಕಿಹೊಳಿ ತಿರುಗೇಟು

• **ಕನ್ನಡಪ್ರಭ ವಾರ್ತೆ** ಬೆಂಗಳೂರು

'ರಮೇಶ್ ಜಾರಕಿಹೊಳಿ ಅವರೇ ಅಶ್ಲೀಲ ವಿಡಿಯೋ ಇರುವ ಸಿ.ಡಿ. ಬಿಡುಗಡೆ ಮಾಡಿದ್ದಾರೆ' ಎಂಬ ಯುವತಿಯ ಆರೋಪವನ್ನು ಜಾರಕಿಹೊಳಿ ತಳ್ಳಿಹಾಕಿದ್ದು, ಸಚಿವನಾಗಿದ್ದುಕೊಂಡು ನನ್ನ ವಿಡಿಯೋ ನಾನೇ ಬಿಡುಗಡೆ ಮಾಡಲು ಸಾಧ್ಯವೇ ಎಂದು ಪ್ರಶ್ನಿಸಿದ್ದಾರೆ.

ಯುವತಿಯ ವಿಡಿಯೋ ಹೇಳಿಕೆ ಬಿಡುಗಡೆ ಬೆನ್ನಲ್ಲೇ ಸ್ಪಷ್ಟನೆ ನೀಡಿದ ಅವರು, 'ನಾನು ನಿರಪರಾಧಿ. ಸತ್ಯ ಏನೆಂಬುದನ್ನು ಸಾಬೀತುಪಡಿಸುತ್ತೇನೆ. ನಾನು ದೂರು ನೀಡಿದ ಅರ್ಧಗಂಟೆಯಲ್ಲಿ ಯುವತಿಯ ವಿಡಿಯೋ ಹೊರಗೆ ಬರುತ್ತದೆ ಎಂದರೆ ಕಾಣದ ಕೈಗಳು ಹೇಗೆ ಕೆಲಸ ಮಾಡುತ್ತಿವೆ ನೋಡಿ. » 4

**ಜಾರಕಿಹೊಳಿ ಹೇಳಿದ್ದೇನು**

• ನಾನು ದೂರು ನೀಡಿದ ಅರ್ಧತಾಸಿನಲ್ಲೇ ಯುವತಿಯ ವಿಡಿಯೋ ರಿಲೀಸ್

• ಕಾಣದ ಕೈಗಳು ಎಷ್ಟರ ಮಟ್ಟಿಗೆ ಕೆಲಸ ಮಾಡುತ್ತಿವೆ ನೋಡಿ

• ಸಚಿವನಾಗಿದ್ದುಕೊಂಡು ನನ್ನ ವಿಡಿಯೋ ನಾನೇ ಬಿಡುಗಡೆ ಮಾಡಲು ಸಾಧ್ಯವೇ?

• ಕಾನೂನು ಹೋರಾಟ ಕೊನೆಯವರೆಗೂ ನಿಲ್ಲಿಸೋದಿಲ್ಲ, ಸಮಗ್ರ ತನಿಖೆ ನಡೆದರೆ ಸತ್ಯ ಹೊರಗೆ ಬರುತ್ತದೆ

• ನನ್ನಂತೆ ಇನ್ನೂ ಹಲವರು ಬಲಿಪಶು ಆಗಿದ್ದಾರೆ. ಎಲ್ಲವನ್ನೂ ತನಿಖೆ ನಡೆಸಲಿ ಎಂದು ನನ್ನ ದೂರಿನಲ್ಲಿ ಯಾರ ಹೆಸರನ್ನೂ ಉಲ್ಲೇಖಿಸಿಲ್ಲ.

# ನನ್ನ ವಿಡಿಯೋ ನಾನೇ ಬಿಡುಗಡೆ ಮಾಡ್ತೀನಾ?

« ಮೊದಲ ಪುಟದಿಂದ

ಸಚಿವನಾಗಿ ನನ್ನ ವಿಡಿಯೋ ನಾನೇ ಬಿಡುಗಡೆ ಮಾಡಲು ಸಾಧ್ಯನಾ? ಇದು ರಾಜಕೀಯ ಷಡ್ಯಂತ್ರ' ಎಂದರು.

**ಹಲವರು ಬಲಿಪಶು:** ಸಿ.ಡಿ. ಪ್ರಕರಣ ಬಗ್ಗೆ ಶನಿವಾರ ಪೊಲೀಸರಿಗೆ ದೂರು ದಾಖಲಿಸಿದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿ, 'ಸಿ.ಡಿ. ಪ್ರಕರಣದೊಡ್ಡ ರಾಜಕೀಯ ಷಡ್ಯಂತ್ರ. ಇದಕ್ಕೆ ನಾನು ಮಾತ್ರವಲ್ಲದೆ, ಇನ್ನೂ ಹಲವರು ಬಲಿಪಶುಗಳಾಗಿದ್ದಾರೆ. ಸಮಗ್ರ ತನಿಖೆ ನಡೆದರೆ ರೂವಾರಿಗಳ ಹೆಸರು ಬಹಿರಂಗವಾಗುತ್ತದೆ. ಹೀಗಾಗಿ ದೂರಿನಲ್ಲಿ ನಾನು ಯಾರ ಹೆಸರನ್ನೂ ಉಲ್ಲೇಖಿಸಿಲ್ಲ' ಎನ್ನುವ ಮೂಲಕ ಯಾರ ಹೆಸರನ್ನೂ ಉಲ್ಲೇಖಿಸದಿರುವ ಬಗ್ಗೆ ಮಾಹಿತಿ ನೀಡಿದರು.

ಹೆಸರು ಉಲ್ಲೇಖಿಸಿದರೆ ಆ ಹೆಸರುಗಳಿಗೆ ಸೀಮಿತವಾಗಿ ತನಿಖೆ ನಡೆಯುತ್ತದೆ. ಸಮಗ್ರ ತನಿಖೆ ನಡೆದರೆ ಮಾತ್ರ ರಾಜಕೀಯ ಷಡ್ಯಂತ್ರದ ರೂವಾರಿಗಳ ಹೆಸರು ಬಹಿರಂಗವಾಗಲು ಸಾಧ್ಯ. ಕಾನೂನು ತಜ್ಞರ ಸಲಹೆ ಮೇರೆಗೆ ಈ ನಿರ್ಧಾರ ಕೈಗೊಳ್ಳಲಾಗಿದೆ. ಆದರೆ, ಬ್ಲಾಕ್‌ಮೇಲ್ ಮಾಡಿರುವ ಬಗ್ಗೆಯೂ ಎಫ್‌ಐಆರ್‌ನಲ್ಲಿ ಪ್ರಸ್ತಾಪಿಸಲಾಗಿದೆ ಎಂದು ಹೇಳಿದರು. ಅಲ್ಲದೆ, ಕಾನೂನು ಹೋರಾಟ ಇದೀಗ ಆರಂಭವಾಗಿದ್ದು, ಮಹಾನ್ ನಾಯಕನವರೆಗೂ ಮುಟ್ಟಲಿದೆ ಎಂದರು. ಶನಿವಾರ ಅಧಿಕೃತವಾಗಿ ದೂರು ನೀಡಲಾಗಿದೆ. ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ಕಾನೂನು ಹೋರಾಟ ಪ್ರಾರಂಭವಾಗಿದ್ದು, ಅಂತಿಮ ಹಂತದವರೆಗೂ ಹೋರಾಟ ಮಾಡುತ್ತೇವೆ. ಕಾನೂನು ಪ್ರಕಾರವೇ ಮುಂದುವರಿಯುತ್ತೇವೆ. ರಾಜಕೀಯವಾಗಿ ತುಳಿಯಲು ನೂರಾರು ಕೋಟಿ ಖರ್ಚು ಮಾಡಿ ಷಡ್ಯಂತ್ರ ಮಾಡಲಾಗಿದೆ ಎಂದರು. ಎಸ್‌ಐಟಿ ಅಧಿಕಾರಿಗಳು ತೀವ್ರಗತಿಯಲ್ಲಿ ತನಿಖೆ ನಡೆಸುತ್ತಿದ್ದಾರೆ. ಕೆಲವರನ್ನು ವಿಚಾರಣೆ ನಡೆಸಿರುವ ಬಗ್ಗೆ ಮಾಹಿತಿ ಇಲ್ಲ. ಮಾಧ್ಯಮದಲ್ಲಿ ನೋಡಿದ್ದೇನೆ ಅಷ್ಟೆ. ಪೊಲೀಸರ ತನಿಖೆಗೆ ಸಂಪೂರ್ಣ ಸಹಕಾರ ನೀಡಲಾಗುವುದು. ದೆಹಲಿ ಮತ್ತು ಬೆಂಗಳೂರು ಕಾನೂನು ತಜ್ಞರು ಮಾಧ್ಯಮದವರ ಮುಂದೆ ಹೋಗಬೇಡಿ ಎಂದು ಸಲಹೆ ನೀಡಿದ್ದರು ಎಂದರು.

## ಯುವತಿಗೆ ರಕ್ಷಣೆ: ಸಚಿವ

ಯುವತಿ ರಕ್ಷಣೆಗೆ ಬಗ್ಗೆ ಮನವಿ ಮಾಡಿರುವ ವಿಡಿಯೋವನ್ನು ಮಾಧ್ಯಮದಲ್ಲಿ ಗಮನಿಸಿದ್ದೇನೆ. ಹೀಗಾಗಿ ಯುವತಿ ಮತ್ತು ಆಕೆಯ ಕುಟುಂಬಕ್ಕೆ ರಕ್ಷಣೆ ನೀಡುವಂತೆ ಎಸ್‌ಐಟಿಗೆ ಸೂಚನೆ ನೀಡಿದ್ದೇನೆ.

• **ಬಸವರಾಜ ಬೊಮ್ಮಾಯಿ**, ಗೃಹ ಸಚಿವ

## ಯುವತಿ ವಿಡಿಯೋ ಆಧರಿಸಿ ಮಹಿಳಾ ಆಯೋಗ ದೂರು

**ಬೆಂಗಳೂರು:** ರಾಸಲೀಲೆ ಪ್ರಕರಣದಲ್ಲಿ ಮಹಿಳೆ ರಕ್ಷಣೆ ಕೋರಿ ಹೇಳಿಕೆ ವಿಡಿಯೋ ಬಿಡುಗಡೆಯಾಗುತ್ತಿದ್ದಂತೆ ಮಹಿಳಾ ಆಯೋಗ ಶನಿವಾರ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡಿದೆ. ಸಂತ್ರಸ್ತ ಯುವತಿ ವಿಡಿಯೋ ಬೆನ್ನಲ್ಲೇ ಪ್ರತಿಕ್ರಿಯಿಸಿರುವ ಮಹಿಳಾ ಆಯೋಗದ ಅಧ್ಯಕ್ಷೆ ಪ್ರಮೀಳಾ ನಾಯ್ಡು, ಯುವತಿ ರಕ್ಷಣೆಗೆ ಮಹಿಳಾ ಆಯೋಗ ಬದ್ಧ ಎಂದಿದ್ದಾರೆ. ಸಂತ್ರಸ್ತೆ ರಕ್ಷಣೆ ನೀಡುವಂತೆ ವಿಡಿಯೋದಲ್ಲಿ ಮನವಿ ಮಾಡಿದ್ದಾಳೆ. ಈ ಸಂಬಂಧ ರಾಜ್ಯ ಪೊಲೀಸ್ ಮಹಾ ನಿರ್ದೇಶಕರು ಮತ್ತು ನಗರ ಪೊಲೀಸ್ ಆಯುಕ್ತರಿಗೆ ರಕ್ಷಣೆ ನೀಡಬೇಕೆಂದು ಹೇಳಿದ್ದೇನೆ. ಇದಕ್ಕೆ ಡಿಜಿಪಿ ಮತ್ತು ಆಯುಕ್ತರು ಸ್ಪಂದಿಸಿದ್ದಾರೆ ಎಂದು ತಿಳಿಸಿದ್ದಾರೆ.

**ಕಾನೂನು ತಜ್ಞರ ಜತೆ ಎಸ್‌ಐಟಿ ಚರ್ಚೆ:** ಪ್ರಕರಣಕ್ಕೆ ಸಂಬಂಧಿಸಿ ಯುವತಿ ವಿಡಿಯೋ ಹೇಳಿಕೆ ನೀಡಿರುವ ಹಿನ್ನೆಲೆಯಲ್ಲಿ ಮುಂದೇನು ಕ್ರಮ ಜರುಗಿಸಬೇಕು ಎಂಬ ಬಗ್ಗೆ ಕಾನೂನು ತಜ್ಞರೊಂದಿಗೆ ಶನಿವಾರ ರಾತ್ರಿ ಎಸ್‌ಐಟಿ ಅಧಿಕಾರಿಗಳು ಸಮಾಲೋಚಿಸಿದ್ದಾರೆ. ಈ ಸಂಬಂಧ ಸ್ವಯಂಪ್ರೇರಿತ ದೂರು ದಾಖಲಿಸಬೇಕೆ ಅಥವಾ ಯುವತಿಯಿಂದಲೇ ದೂರು ಪಡೆಯಬೇಕೆ ಎಂದು ಎಸ್‌ಐಟಿ ಚರ್ಚಿಸಿದ್ದು, ಭಾನುವಾರ ಅಧಿಕಾರಿಗಳು ನಿರ್ಧರಿಸಲಿದ್ದಾರೆ ಎಂದು ತಿಳಿದು ಬಂದಿದೆ.